ಮೈಸೂರ ಗೆಜೆಟ.

ನಂ. 42.] ಸರ್ಕಾರದಿಂದ ಪಾಯಿಷ್ ಆದ್ದು [ನಂ 9.

ಬೆಂಗಳೂರು, ಗುರುವಾರ, ಫೆಬ್ರವರಿ ತಾ|| 28, ಸ್ ಇ 1907.

ಭಾಗಗಳನ್ನು ಪ್ರತ್ಯೇಕ ಸೇರಿಸಿ ಇಡುವ ಪ್ರಯ್ಯ ಬೇರೆ ಬೇರೆಯಾಗಿ ಪುಟಸಂಖ್ಯೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೆ ಭಾಗ—ಮೈಸೂರು ಸೀಮೆಯ ಶ್ರೀಮ್ಮ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇನ್ಸ್ಟ್ರಾರ್ನಾಮೆಗಳು.

2ನೆ ಭಾಗ—ರೆಸಿಡೆಂಟರು, ಜೀಫ್ ಜಡ್ಜಿಯವರು, ಸರ್ವೆ ಮತ್ತು ಇನಾಂ ಸೂಪರಿಂಟೆಂಡೆಂಟರು, ರೆವಿನ್ಯೂ ಕಮ್ಮಿಷನರವರು, ಕಲೆಕ್ಟೋಲರವರು, ಪಬ್ಲಿಕ್ ವರ್ಕ್ಸ್ ಆಫಿಸರ್‌ಗಳು, ಫಾರೆಸ್ಟ್ಟು, ರೆಜಿಸ್ಟ್ರೇರ್ಸ್ ಮತ್ತು ಎಡ್ಯುಕೇಷನ್ ಇನ್‌ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್‌ಬೋರ್ಡು ಪ್ರಸಿಡೆಂಟರು ಡಿಸ್ಟ್ರಿಕ್ಟು ಮತ್ತು ಸೆಷನ್ ಜಡ್ಜಿರು, ಡಿಸ್ಟ್ರಿಕ್ಟು ಪೊಲೀಸ್ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜಿರು, ಪೋಲೀಸ್ ಸೂಪರಿಂಟೆಂಡೆಂಟರು, ಫಾರೆಸ್ಟ್ ಆಫಿಸರ್‌ಗಳು ಇವರುಗಳಿಂದ ಕೊಡೋಣಾದ ಇನ್ಸ್ಟ್ರಾರ್ನಾಮೆಗಳು ವಗೈರೆ ಕಾಲಸ್ಥಿತಿ ರಿಪೋರ್ಟುಗಳು; ಪೋಸ್ಟ್‌ಆಫೀಸ್ ನೋಟಿಸುಗಳು.

3ನೆ ಭಾಗ—ಲೆಜಿಸ್ಲೇಟಿವ್ ರೆಗ್ಯುಲೇಷನ್‌ಗಳು ಮತ್ತು ಅವುಗಳಂತೆ ಆದ ನಿಬಂಧನೆಗಳು—ಇಲ್ಲಾ.

4ನೆ ಭಾಗ—ಸರ್ಕಾರೀ ಕಾಗದ ಪತ್ರಗಳು.

I ನೆ ಭಾಗ.

ಮೈಸೂರು ಸೀಮೆಯ ಶ್ರೀಮ್ಮ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇನ್ಸ್ಟ್ರಾರ್ನಾಮೆಗಳು.

ಜನರಲ್ ಮತ್ತು ರೆವಿನ್ಯೂ.

ತಾರೀಖು 6ನೆ ಫೆಬ್ರವರಿ 1907.

ನಂ. 6907—ಸ್ಯ. 129-06-4, ಶಿವಮೊಗ್ಗ ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ವಿವರಿಸಿರುವ ಸ್ಥಳಗಳಿಗೆ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬಂದೊಂದರ ಪಕ್ಕದಲ್ಲಿಯೂ ನಮೂದಿಸಿರುವ ಜಾತ್ರೆ ಮೊದಲಾದ ಕಾಲಗಳಲ್ಲಿ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶ ಕೊಟ್ಟರೆ ಆ ಸ್ಥಳಗಳಲ್ಲಿ ಪ್ಲೇಗು ರೋಗವು ಆರಂಭಿಸುವ ಅಪಾಯವಿರುವುದಾಗಿ ಮೈಸೂರು ಶ್ರೀಮ್ಮ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡು ಬಂದಿರುವುದರಿಂದ :—

ಜಾತ್ರೆಯ ಹೆಸರು.	ನಡೆಯುವ ಸ್ಥಳ.	ತಾಲ್ಲೂಕು.	ತಾರೀಖು	
			ಇಂದ	ಗೆ
(1) ಮಲ್ಲೇಶ್ವರದೇವರ ಜಾತ್ರೆ.	ತೊಗ್ಗರ್ಸಿ ...	ತೀರ್ಥಹಳ್ಳಿ ...	22—2—07	28—2—07
(2) ಕೇತಾರೇಶ್ವರ ದೇವರ ಜಾತ್ರೆ.	ಬೆಳಗಾವಿ ...	ಹೊಸನಗರ ...	2—3—07	8—3—07

1897ನೆ ವರ್ಷದ 2ನೆ ನಂಬರ್ ಎಪಿಡೆಮಿಕ್ ಡಿಸೀಸಸ್ ಎಂಬ ಅಂಟುರೋಗಗಳ ಸಂಬಂಧವಾದ ರೆಗ್ಯುಲೇಷನ್‌ನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಶ್ರೀಮ್ಮ ಮಹಾರಾಜರವರ ಸರ್ಕಾರದವರು ಪ್ರತಿ ಒಂದು ಜಾತ್ರೆಯ ಪಕ್ಕದಲ್ಲಿಯೂ ನಮೂದಿಸಿರುವ ತಾರೀಖುಗಳಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಆ ಜಾತ್ರೆಯ ಸ್ಥಳಕ್ಕೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇನ್ಸ್ಟ್ರಾರ್ನಾಮೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗಳಿಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.